ಉಪಾಧ್ಯಕ್ಷರು :- ಅದು ಆಮೇಲೆ ನೋಡೋಣ. ಈಗ ಕೃಷ್ಣಮೂರ್ತಿಯರು.

ನಿಯಮ 351 ರ ಮೇರೆಗೆ ಚರ್ಚೆ.

(1) ಕಡೂರು ತಾಲ್ಲೂಕು ಯಗಚಿ ಸರ್ಕಾರಿ ಪ್ರಾಥಮಿಕ ಶಾಲೆಯ ವಾಲಿಬಾಲ್ ತಂಡವನ್ನು ಅಂತರರಾಷ್ಟ್ರೀಯ ಕ್ರೀಡೆಯಲ್ಲಿ ಭಾಗವಹಿಸಲು ಪ್ರೋತ್ಸಾಹ ನೀಡುವುದು.

ಶ್ರೀ ಕೆ. ಎಂ. ಕೃಷ್ಣಮೂರ್ತಿ :- ಮಾನ್ಯ ಯುವಜನಸೇವೆ ಮತ್ತು ಕ್ರೀಡಾ ಇಲಾಖೆ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ಅಜಯ್ ಕುಮಾರ್ ಸರ್‌ನಾಯಕ್ (ಕ್ರೀಡೆ ಮತ್ತು ಯುವಜನಸೇವೆ ರಾಜ್ಯ ಸಚಿವರು) :- ಕಡೂರು ತಾಲ್ಲೂಕು ಯಗಟಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ ವಾಲಿಬಾಲ್ ತಂಡವನ್ನು ಅಂತರರಾಷ್ಟ್ರೀಯ ಕ್ರೀಡೆಯಲ್ಲಿ ಭಾಗವಹಿಸಲು ಪ್ರೋತ್ಸಾಹ ನೀಡುವ ಬಗ್ಗೆ, ಮಾನ್ಯ ಸದಸ್ಯರು ವಿಷಯವನ್ನು ಎತ್ತಿದ್ದಾರೆ.

ಕಡೂರು ತಾಲ್ಲೂಕು ಯಗಟಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ 4 ವಿದ್ಯಾರ್ಥಿನಿಯರು ರಾಜ್ಯ ಟೀಮಿಗೆ ಆಯ್ಕೆಯಾಗಿದ್ದು, ಬಾಗಲಕೋಟೆ ಗ್ರಾಮೀಣ ಕ್ರೀಡಾ ಕೂಟದಲ್ಲಿ ರಾಜ್ಯ ತಂಡವನ್ನು ಪ್ರತಿನಿಧಿಸಿದ್ದಾರೆ.

ಈ ಮಕ್ಕಳು ನೇರವಾಗಿ ಅಂತರಾಷ್ಟ್ರೀಯ ಕ್ರೀಡೆಯಲ್ಲಿ ಭಾಗವಹಿಸಲು ಸಾಧ್ಯವಿರುವುದಿಲ್ಲ. ರಾಷ್ಟ್ರೀಯ ಕ್ರೀಡಾ ಫೆಡರೇಷನ್‌ರವರು ರಾಷ್ಟ್ರೀಯ ತಂಡವನ್ನು ಆಯ್ಕೆ ಮಾಡಿದ ನಂತರ, ಅಂತರರಾಷ್ಟ್ರೀಯ ಮಟ್ಟದಲ್ಲಿ ಪಾಲ್ಗೊಳ್ಳಲೂ ಸಾಧ್ಯವಾಗುತ್ತದೆ.

ಮೇಲ್ಕಂಡ ಗ್ರಾಮದ ಮಕ್ಕಳಿಗೆ ಹೆಚ್ಚಿನ ತರಬೇತಿ ರಾಜ್ಯ ಸರ್ಕಾರವು ನೀಡುವ ಬಗ್ಗೆ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಲು ಎಲ್ಲಾ ರೀತಿಯ ಪ್ರೋತ್ಸಾಹ ನೀಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆ.

ಶ್ರೀ ಕೆ. ಎಂ. ಕೃಷ್ಣಮೂರ್ತಿ :- ಕ್ಲಾರಿಫಿಕೇಷನ್ ಕೇಳುತ್ತೇನೆ.

ಉಪಾಧ್ಯಕ್ಷರು :- ಹಾಗೆ ಕೇಳುವುದಕ್ಕೆ ಬರುವುದಿಲ್ಲ.

ಶ್ರೀ ಕೆ. ಎಂ. ಕೃಷ್ಣಮೂರ್ತಿ :- ನಾನು ಒಂದು ಕ್ಲಾರಿಫಿಕೇಷನ್ ಮಾಡುತ್ತೇನೆ. ಮಾನ್ಯ ಸಚಿವರು ರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿಲ್ಲ ಎಂದು ಹೇಳಿದ್ದಾರೆ. ಪಂಜಾಬ್‌ನಲ್ಲಿ ಮತ್ತು ಡೆಲ್ಲಿಯಲ್ಲಿ ನಡೆದಂಥ ಕ್ರೀಡಾಕೂಟಗಳಲ್ಲಿ ಮಕ್ಕಳು ಭಾಗವಹಿಸಿದ್ದಾರೆ. ಅವರಿಗೆ ಉತ್ತಮವಾದ ತರಬೇತಿಯನ್ನು ಕೊಟ್ಟು ರಾಷ್ಟ್ರೀಯ ಮಟ್ಟದಲ್ಲಿ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಕ್ರೀಡಾಪಟುಗಳನ್ನಾಗಿ ಮಾಡುವಂಥ ಜವಾಬ್ದಾರಿ ಸರ್ಕಾರದ ಮೇಲಿದೆ. ಅದಕ್ಕೋಸ್ಕರ ಕ್ರೀಡಾ ಸಚಿವರು ಜವಾಬ್ದಾರಿಯನ್ನು ತೆಗೆದುಕೊಂಡು ಆ ಮಕ್ಕಳಿಗೆ ಉತ್ತಮವಾದ ತರಬೇತಿಯನ್ನು ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

(ಉತ್ತರವಿಲ್ಲ)